## ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1137 |
| ಮಾನ್ಯ ಸದಸ್ಯರ ಹೆಸರು | ಶ್ರೀ ಕೆ.ಅಬ್ದುಲ್ ಜಬ್ಬರ್<br>(ವಿಧಾನ ಸಭೆ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 17.03.2025 |
| ಉತ್ತರಿಸುವ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ದಾವಣಗೆರೆ ಜಿಲ್ಲೆಯಲ್ಲಿರುವ ಸರ್ಕಾರಿ ಜಿಲ್ಲಾ ಆಸ್ಪತ್ರೆಗಳೆಷ್ಟು; ಜಿಲ್ಲೆಯಲ್ಲಿರುವ ಸರ್ಕಾರಿ ಆಸ್ಪತ್ರೆಗಳೆಷ್ಟು;</td><td>ದಾವಣಗೆರೆ ಜಿಲ್ಲೆಯಲ್ಲಿರುವ ಸರ್ಕಾರಿ ಆಸ್ಪತ್ರೆಗಳ ವಿವರಗಳು ಈ ಕೆಳಕಂಡಂತಿವೆ:-
<table>
<tr><th>ಆಸ್ಪತ್ರೆ</th><th>ಸಂಖ್ಯೆ</th></tr>
<tr><td>ಚಿಗಟೇರಿ ಜಿಲ್ಲಾ ಆಸ್ಪತ್ರೆ</td><td>01</td></tr>
<tr><td>ತಾಯಿ ಮತ್ತು ಮಕ್ಕಳ ಆಸ್ಪತ್ರೆ</td><td>01</td></tr>
<tr><td>ಸಾರ್ವಜನಿಕ ಆಸ್ಪತ್ರೆ</td><td>04</td></tr>
<tr><td>ಸಮುದಾಯ ಆರೋಗ್ಯ ಕೇಂದ್ರ</td><td>04</td></tr>
<tr><td>ಪ್ರಾಥಮಿಕ ಆರೋಗ್ಯ ಕೇಂದ್ರ</td><td>80+02 (2 ನಗರ ಪ್ರಾ.ಆ ಕೇಂದ್ರಗಳು)</td></tr>
<tr><td>ಪ್ರಸೂತಿ ಆರೋಗ್ಯ ಕೇಂದ್ರ</td><td>01</td></tr>
<tr><td>ನಗರ ಆರೋಗ್ಯ ಕೇಂದ್ರ</td><td>09</td></tr>
</table></td></tr>
<tr><td>(ಆ)</td><td>ಇರುವಂತಹ ಸರ್ಕಾರಿ ಆಸ್ಪತ್ರೆಗಳಿಗೆ ಒದಗಿಸಲಾಗುತ್ತಿರುವ ಸೌಲಭ್ಯ/ಸವಲತ್ತುಗಳು ಯಾವುವು; (ಸಂಪೂರ್ಣ ಮಾಹಿತಿ ಒದಗಿಸುವುದು)</td><td>ಜಿಲ್ಲಾಸ್ಪತ್ರೆಯಲ್ಲಿ ಸಿಟಿ-ಸ್ಕ್ಯಾನ್ ಮತ್ತು ವೆಂಟಿಲೇಟರ್ ಡಯಾಲಿಸಸ್ ವ್ಯವಸ್ಥೆ , ಟ್ರಾಮಾ ಕೇರ್ ಸೆಂಟರ್ ಮತ್ತು ಎನ್.ಆರ್.ಸಿ ವಿಭಾಗ ಇದೆ.<br><br>ಎಲ್ಲಾ ತಾಲ್ಲೂಕು ಆಸ್ಪತ್ರೆಗಳಲ್ಲಿ ಎಲ್.ಎಂ.ಒ ಇದ್ದು 24*7 ಸೇವೆ ನೀಡಲಾಗುತ್ತಿದೆ.<br><br>• ಅಂಬುಲೆನ್ಸ್ ಸೇವೆ ಒದಗಿಸಲಾಗುತ್ತಿದೆ.<br>• 25 ಪ್ರಾಥಮಿಕ ಆರೋಗ್ಯ ಕೇಂದ್ರಗಳು 24*7 ಆಗಿ ಕಾರ್ಯ ನಿರ್ವಹಿಸಲು ಒದಗಿಸಲಾಗಿದೆ.<br>• ಎಲ್ಲಾ ಆರೋಗ್ಯ ಕೇಂದ್ರಗಳಲ್ಲಿ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ, ಆಕ್ಸಿಜನ್, ಔಷಧಿ ಪರಿಕರಗಳನ್ನು ಒದಗಿಸಲಾಗಿದೆ.</td></tr>
</table>

| | | |
|---|---|---|
| ಇ) | ಇರುವಂತಹ ಆಸ್ಪತ್ರೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ಸಿಬ್ಬಂದಿಗಳೆಷ್ಟು; ಗುತ್ತಿಗೆ/ಹೊರಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು; (ಸಂಪೂರ್ಣ ಮಾಹಿತಿ ಒದಗಿಸುವುದು) | 1. ಸರ್ಕಾರಿ ಸಿಬ್ಬಂದಿಗಳ ಸಂಖ್ಯೆ: 1037 (ವಿವರಗಳನ್ನು **ಅನುಬಂಧ-1** ರಲ್ಲಿ ನೀಡಲಾಗಿದೆ)<br>2. ಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ವಿವರ:<br>• ಗುತ್ತಿಗೆ ತಜ್ಞ ವೈದ್ಯರು-01<br>• ಗುತ್ತಿಗೆ MBBS ವೈದ್ಯರು-16<br>• ತುರ್ತು ಚಿಕಿತ್ಸಾ ವೈದ್ಯರು-07<br>3. ಹೊರಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ವಿವರಗಳು ಈ ಕೆಳಕಂಡಂತಿವೆ:-<br>• ಫಾರ್ಮಸಿ ಅಧಿಕಾರಿ-22<br>• ಕಿರಿಯ ಪ್ರಯೋಗ ಶಾಲಾ ತಾಂತ್ರಿಕ ಅಧಿಕಾರಿ-2,<br>• ಗ್ರೂಪ್ ಡಿ-100 (2 ಹುದ್ದೆ ಆರೋಗ್ಯ ವಿಸ್ತರಣಾ ಕೇಂದ್ರ)<br>• ನಾನ್ ಕ್ಲಿನಿಕಲ್ ಗ್ರೂಪ್ ಡಿ-21<br>• ಶುಶ್ರೂಷಕರು-2 (2 ಹುದ್ದೆ ಆರೋಗ್ಯ ವಿಸ್ತರಣಾ ಕೇಂದ್ರ),<br>• ಇತರೆ 147 ಸಿಬ್ಬಂದಿಗಳನ್ನು ಹೊರಗುತ್ತಿಗೆ ಆಧಾರದ ಮೇಲೆ ಪಡೆಯಲಾಗಿದೆ.<br>• ರಾಜ್ಯ ವಲಯ ಆಸ್ಪತ್ರೆಗಳಲ್ಲಿ ಒಟ್ಟು 66 ಗ್ರೂಪ್ -ಡಿ ಹುದ್ದೆಗಳನ್ನು ಹೊರಗುತ್ತಿಗೆ ಆಧಾರದ ಮೇಲೆ ಪಡೆಯಲಾಗಿದೆ. |

| | | |
|---|---|---|
| ಈ) | ಪ್ರಸ್ತುತ ಖಾಲಿ ಇರುವ ವೈದ್ಯರು ತಜ್ಞ ವೈದ್ಯರು ಹಾಗೂ ವೈದ್ಯೇತರ ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳಲು ಕ್ರಮ ವಹಿಸಲಾಗಿದೆಯೇ(ಪೂರ್ಣ ಮಾಹಿತಿ ಒದಗಿಸುವುದು) | ರಾಜ್ಯದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಖಾಲಿಯಿರುವ ತಜ್ಞರು, ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ ಹಾಗೂ ದಂತ ಆರೋಗ್ಯ ಅಧಿಕಾರಿಗಳನ್ನು ನೇಮಕ ಮಾಡಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ:<br><br>1. ಇಲಾಖೆಯಲ್ಲಿನ ಖಾಲಿಯಿರುವ 120 ತಜ್ಞ ವೈದ್ಯರು ಹಾಗೂ 100 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ ಹುದ್ದೆಗಳನ್ನು ನೇರ ನೇಮಕಾತಿಯಡಿ ಭರ್ತಿ ಮಾಡುವ ಪ್ರಕ್ರಿಯೆ ಚಾಲ್ತಿಯಲ್ಲಿದೆ.<br>2. The Karnataka compulsory service by candidates completed Medical courses Act, 2012 ಹಾಗೂ ಕಾಲಕಾಲಕ್ಕೆ ಮಾಡಲಾದ ತಿದ್ದುಪಡಿ ಕಾಯ್ದೆ ಹಾಗೂ ಇದರಡಿ ರಚಿಸಲಾದ ನಿಯಮದಡಿ ಎಂ.ಬಿ.ಬಿ.ಎಸ್.,/ಸ್ನಾತಕೋತ್ತರ ಪದವಿ ಪೂರೈಸಿ ಬರುವ ವೈದ್ಯರಿಗೆ ಒಂದು ವರ್ಷದ ಕಡ್ಡಾಯ ಸೇವೆಗೆ ನೇಮಿಸಲಾಗುತ್ತಿದೆ.<br>3. ಇಲಾಖೆಯಲ್ಲಿ ಸೇವಾನಿರತ ಕೋಟಾ ಅಡಿಯಲ್ಲಿ ಉನ್ನತ ವ್ಯಾಸಂಗಕ್ಕೆ ತೆರಳಿ, ವ್ಯಾಸಂಗವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿ ಹಿಂದಿರುಗುವ ವೈದ್ಯರಿಗೆ ಅವರು ಹೊಂದುವ ತಜ್ಞತೆಯ ಹುದ್ದೆಗೆ ನೇಮಿಸಲಾಗುತ್ತಿದೆ.<br>4. ಆದೇಶ ಸಂಖ್ಯೆ : ಆಕುಕ 619 ಹೆಚ್‌ಎಸ್‌ಹೆಚ್ 2022, ದಿನಾಂಕ : 17/01/2024 ಹಾಗೂ 11/03/2024ರಲ್ಲಿ ಇಲಾಖೆಯಲ್ಲಿ ಖಾಲಿ ಇರುವ 337 ತಜ್ಞ ವೈದ್ಯರು ಮತ್ತು 250 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳನ್ನು ಭರ್ತಿ ಮಾಡಲು ಕೆಲವೊಂದು ಷರತ್ತುಗಳಿಗೆ ಒಳಪಡಿಸಿ ಗುತ್ತಿಗೆ ಆಧಾರದ ಮೇಲೆ ನೇಮಿಸಿಕೊಳ್ಳಲು ಅನುಮತಿ ನೀಡಲಾಗಿದೆ.<br>5. ಸುತ್ತೋಲೆ ಸಂಖ್ಯೆ : ಆಕುಕ 21 ಹೆಚ್‌ಎಸ್‌ಹೆಚ್ 2025, ದಿನಾಂಕ : 08/01/2025 ಮತ್ತು ಸೇರ್ಪಡೆ ಸಂಖ್ಯೆ : HFW/1/PRS/2025, ದಿನಾಂಕ : 25/01/2025 ಹಾಗೂ ಪತ್ರ ದಿನಾಂಕ:29/01/2025ರಲ್ಲಿ, ಒಟ್ಟಾರೆಯಾಗಿ 250 ಮಿತಿಯಲ್ಲಿ ಅಗತ್ಯಕ್ಕನುಗುಣವಾಗಿ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ/ತುರ್ತು ಚಿಕಿತ್ಸಾ ವೈದ್ಯಾಧಿಕಾರಿ/ ಹಿರಿಯ |

ವೈದ್ಯಾಧಿಕಾರಿ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲು ಅನುಮತಿ ನೀಡಲಾಗಿದೆ.

6. ಆದೇಶ ಸಂಖ್ಯೆ : ಅಕುಕ 1072 ಹೆಚ್‌ಎಸ್‌ಹೆಚ್ 2024, ದಿನಾಂಕ : 01/01/2025ರಲ್ಲಿ, ಇಲಾಯಲ್ಲಿ Hiring on per day basis, Hiring at AB-Ark rates & Hiring for per-case basis ವಿಧಾನದಡಿ ತಜ್ಞ ವೈದ್ಯರ ಸೇವೆಯನ್ನು ಪಡೆಯಲು ಅವಕಾಶ ಕಲ್ಪಿಸಲಾಗಿದೆ.
7. ಆದೇಶ ಸಂಖ್ಯೆ : ಆಕುಕ 87 ಸಿಜಿಇ 2025, ದಿನಾಂಕ : 21/02/2025ರಲ್ಲಿ ಇಲಾಖೆಯಲ್ಲಿನ 08 ದಂತ ಆರೋಗ್ಯಾಧಿಕಾರಿ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಿಸಲು ಅನುಮತಿ ನೀಡಲಾಗಿದೆ.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಖಾಲಿಯಿರುವ 558 ಅರೆ ವೈದ್ಯಕೀಯ ಹುದ್ದೆಗಳನ್ನು ನೇರ ನೇಮಕಾತಿಯಡಿ ಭರ್ತಿ ಮಾಡುವ ಪ್ರಕ್ರಿಯೆ ಪ್ರಗತಿಯಲ್ಲಿದ್ದು, ಪ್ರಸ್ತುತ ಅಭ್ಯರ್ಥಿಗಳ ಮೂಲ ದಾಖಲೆಗಳ ಪರಿಶೀಲನೆಯು ಪೂರ್ಣಗೊಂಡಿದೆ.

ಇಲಾಖೆಯಲ್ಲಿ ಖಾಲಿಯಿರುವ 200 ಕಿರಿಯ ಪ್ರಯೋಗಶಾಲಾ ತಾಂತ್ರಿಕ ಅಧಿಕಾರಿ ಹಾಗೂ 400 ಫಾರ್ಮಸಿ ಅಧಿಕಾರಿಗಳನ್ನು ನೇರ ನೇಮಕಾತಿಯಡಿ ಭರ್ತಿ ಮಾಡುವವರೆಗೆ ಜಿಲ್ಲಾ ಮಟ್ಟದ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ನೇಮಿಸಿಕೊಳ್ಳಲು ಪತ್ರ ಸಂಖ್ಯೆ : ಆಕುಕ 103 ಹೆಚ್‌ಎಸ್‌ಎಂ 2019, ದಿನಾಂಕ : 03/02/2024ರಲ್ಲಿ ಅನುಮತಿ ನೀಡಲಾಗಿದೆ.

ಇಲಾಖೆಯಲ್ಲಿ ಕಲ್ಯಾಣ ಕರ್ನಾಟಕ ವೃಂದದಲ್ಲಿನ ಖಾಲಿಯಿರುವ ಒಟ್ಟು 320 ವಿವಿಧ ಅರೆ ವೈದ್ಯಕೀಯ ಹುದ್ದೆಗಳನ್ನು ಭರ್ತಿ ಮಾಡಲು ವಿಶೇಷ ನೇಮಕಾತಿ ಸಮಿತಿ ಮೂಲಕ ಭರ್ತಿ ಮಾಡಲು Online ನಲ್ಲಿ ಅರ್ಜಿಗಳನ್ನು ಆಹ್ವಾನಿಸಿದ್ದು, ಅರ್ಹ ಅಭ್ಯರ್ಥಿಗಳ ದಾಖಲಾತಿ ಪರಿಶೀಲನಾ ಕಾರ್ಯ ಪೂರ್ಣಗೊಂಡಿದ್ದು, ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟಿಸುವ ಹಂತದಲ್ಲಿದೆ.